ಈ) ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಸರ್ಕಾರವೇನಾದರೂ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆಯೇ? (ವಿವರಗಳನ್ನು ನೀಡುವುದು)

ಶ್ರೀ ಎಂ.ವೈ ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :—

ಅ) ನಿಮ್ಮಕಾಯಲಹಳ್ಳಿ, ನಲ್ಲಸಾನಂಪಲ್ಲಿ, ಮತ್ತು ನಲ್ಲಗುಟ್ಟಹಳ್ಳಿ ಗ್ರಾಮಗಳಲ್ಲಿ ಮೇಲಚ್ಚಿದ ನೀರು ಸಂಗ್ರಹಾಲಯದ ನಿರ್ಮಾಣ ಕೆಲಸಗಳು ಮುಕ್ತಾಯ ಹಂತದಲ್ಲಿದ್ದು, ಸದರಿ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಲು ನೇರ ವಿತರಣಾ ಪದ್ಧತಿಯಿಂದ ನೀರು ಪೂರೈಕೆ ಮಾಡಲಾಗುತ್ತಿದೆ. ಸದರಿ ಟ್ಯಾಂಕ್‌ಗಳ ಕೆಲಸಗಳನ್ನು ಆದ್ಯತೆ ಮೇಲೆ ಪೂರ್ಣಗೊಳಿಸಿ ಗ್ರಾಮಗಳಿಗೆ ಸಮರ್ಪಕ ರೀತಿಯಲ್ಲಿ ನೀರು ಪೂರೈಕೆ ಮಾಡಲಾಗುವುದು.

ಆ) ಗೊಲ್ಲಹಳ್ಳಿ ಗ್ರಾಮಕ್ಕೆ ನೀರು ಸರಬರಾಜು ಯೋಜನೆ ಮಂಜೂರಾಗಿರುವುದಿಲ್ಲ. ವೆಂಕಟಾಪುರ ಗ್ರಾಮಕ್ಕಾಗಿ ಇತ್ತೀಚೆಗೆ ಜಲಮೂಲ ಸ್ಥಾಪಿಸಲಾಗಿದ್ದು, ಕೊಳವೆ ನೀರು ಸರಬರಾಜು ಯೋಜನೆ ಅನುಷ್ಠಾನಗೊಳಿಸಲು ಕ್ರಮ ಕೈಕೊಳ್ಳಲಾಗುತ್ತಿದೆ. ಪುಲಗಲ್ ಗ್ರಾಮಕ್ಕೆ ಕೊಳವೆ ನೀರು ಸರಬರಾಜು ಯೋಜನೆಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ. ಪಾಳ್ಯಕೆರೆ ಗ್ರಾಮಕ್ಕೆ ಕೊಳವೆ ನೀರು ಸರಬರಾಜು ಯೋಜನೆಯ ಹಾಮಗಾರಿಗಳ ನಿರ್ಮಾಣ ಕೆಲಸವನ್ನು ಟೆಂಡರ್ ಆಧಾರದ ಮೇಲೆ ವಹಿಸಲಾಗಿದೆ.

ಇ. ಯೋಜನೆಗಳನ್ನು ಶೀಘ್ರವಾಗಿ ಅನುಷ್ಠಾನಗೊಳಿಸಿ ಗ್ರಾಮಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಅಥಣಿ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲಾ ಕಟ್ಟಡಗಳ ನಿರ್ಮಾಣ

2522(3149) ಶ್ರೀ ಡೊಂಗರಗಾಂವ್ ಶಹಪಾಹಾನ್ ಇಸ್ಮಾಯಿಲ್ ಖಾನ್ (ಅಥಣಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಅಥಣಿ ತಾಲ್ಲೂಕಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಎಷ್ಟು ಸರ್ಕಾರಿ ಪ್ರಾಥಮಿಕ ಶಾಲಾ ಕೊಠಡಿಗಳ ಕೊರತೆಯಿದೆ;

ಆ) ಕೊರತೆಯಿರುವ ಶಾಲಾ ಕೊಠಡಿಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಒಟ್ಟು 444 ಸರ್ಕಾರಿ ಪ್ರಾಥಮಿಕ ಶಾಲಾ ಕೊಠಡಿಗಳ ಕೊರತೆಯಿದೆ.

೧. ಕಪ್ಪು ಹಲಗೆ ಕಾರ್ಯಕ್ರಮ ಯೋಜನೆಯಡಿಯಲ್ಲಿ 71 ಶಾಲಾ ಕೊಠಡಿಗಳನ್ನು ನಿರ್ಮಿಸಲಾಗಿದೆ.

೨. ಪ್ರಧಾನ ಮಂತ್ರಿ ಗ್ರಾಮೋದಯ ಯೋಜನೆಯಡಿ 3 ಕೊಠಡಿಗಳನ್ನು ನಿರ್ಮಿಸಲಾಗಿದೆ.

೩. 2000-01 ರಲ್ಲಿ ಬಿಡುಗಡೆಯಾದ ಅನುದಾನದಲ್ಲಿ 16 ಕೊಠಡಿಗಳನ್ನು ಅಥಣಿ ತಾಲ್ಲೂಕಿಗೆ ನೀಡಲಾಗಿದೆ.

ಅಥಣಿ ತಾಲ್ಲೂಕಿನ ಕೊಕಟನೂರು ಗ್ರಾಮಕ್ಕೆ ಪದವಿ ಪೂರ್ವ ಕಾಲೇಜು ಮಂಜೂರಾತಿ

2523(3150) ಶ್ರೀ ಡೊಂಗರಗಾಂವ್ ಶಹಜಾಹಾನ್ ಇಸ್ಮಾಯಿಲ್ ಖಾನ್ (ಅಥಣಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಳಗಾಂ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಜನರು ಶೈಕ್ಷಣಿಕ ಸೌಲಭ್ಯದಿಂದ ವಂಚಿತರಾಗಿ ಚಳುವಳಿಗೆ ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಅಥಣಿ ತಾಲ್ಲೂಕು ಕೊಕಟನೂರು ಗ್ರಾಮದಲ್ಲಿ ಅತೀ ಹೆಚ್ಚಿನ ವಿದ್ಯಾರ್ಥಿಗಳು ಇದ್ದು ಪದವಿ ಪೂರ್ವ ಕಾಲೇಜಿನ ಅವಶ್ಯಕಗತೆಗೆ ಬೇಡಿಕೆ ಇದ್ದು ಸರ್ಕಾರ ಇಲ್ಲಿ ಹೊಸ ಕಾಲೇಜು ಮಂಜೂರು ಮಾಡಲು ಯಾವ ಕ್ರಮ ಕೈಗೊಂಡಿದೆ. ಈ ವರ್ಷದಲ್ಲಿಯಾದರೂ ಮಂಜೂರಾತಿ ದೊರೆಯುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಇಲ್ಲ. ಆದರೆ ಅಥಣಿ ತಾಲ್ಲೂಕಿನಲ್ಲಿ ಅಗತ್ಯಕ್ಕೆ ಅನುಗುಣವಾಗಿ ಪದವಿ ಪೂರ್ವ ಕಾಲೇಜುಗಳಿರುತ್ತವೆ.

ಆ) ಅಥಣಿ ತಾಲ್ಲೂಕಿನಲ್ಲಿ 11 ಪದವಿ ಪೂರ್ವ ಕಾಲೇಜುಗಳಿರುತ್ತವೆ. ಈ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಕಡಿಮೆ ಇರುತ್ತದೆ. ಮತ್ತು ಇನ್ನಷ್ಟು ವಿದ್ಯಾರ್ಥಿಗಳ ದಾಖಲಾತಿಗೆ ಅವಕಾಶವಿರುತ್ತದೆ. ಆದ್ದರಿಂದ ಅಥಣಿ ತಾಲ್ಲೂಕು ಕೊಕಟನೂರು ಗ್ರಾಮಕ್ಕೆ ಪ್ರತ್ಯೇಕ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಕಂಡುಬರುವುದಿಲ್ಲ.